ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಹೊಸ ತಾಲ್ಲೂಕುಗಳ ಅಭಿವೃದ್ಧಿ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) -

104 (624) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಚಿಕ್ಕಮಗಳೂರು ಜಿಲ್ಲೆಯ ತರೀಕರೆ ತಾಲ್ಲೂಕಿನಿಂದ ಅಜ್ಜಂಪುರವನ್ನು ಬೇರ್ಪಡಿಸಿ ಅಜ್ಜಂಪುರ ತಾಲ್ಲೂಕು ಕೇಂದ್ರವಾಗಿ ಘೋಷಿಸಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ತಾಲ್ಲೂಕು ಕೇಂದ್ರವಾಗಿ ಘೋಷಿಸಿದ ನಂತರ ಅಲ್ಲಿ ತಾಲ್ಲೂಕು ಆಡಳಿತ ಕಾರ್ಯನಿರ್ವಹಣೆಯಲ್ಲಿದೆಯೇ ; ಎಲ್ಲಾ ಇಲಾಖೆಯ ಸರ್ಕಾರಿ ಕಛೇರಿಗಳನ್ನು ಪ್ರಾರಂಭಿಸಲಾಗಿದೆಯೇ ; ಮೂಲಸೌಕರ್ಯ ಒದಗಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ತಾಲ್ಲೂಕಿಗೆ ಒಳಪಡುವ ಹೋಬಳಿ ಕೇಂದ್ರಗಳು ಹಾಗೂ ಗ್ರಾಮಗಳನ್ನು ಗುರುತಿಸಲಾಗಿದೆಯೇ ;

(ಈ) ಯಾವ ಕಾಲಮಿತಿಯೊಳಗೆ ಪೂರ್ಣ ಪ್ರಮಾಣದ ಆಡಳಿತ ವ್ಯವಸ್ಥೆಯನ್ನು ಅಜ್ಜಂಪುರದಲ್ಲಿ ನಿರೀಕ್ಷಿಸಬಹುದಾಗಿದೆ ?